ಕಳುಹಿಸಬೇಕಾಗಿದೆ. ಗ್ರಾಮ ಸಭೆಗಳಲ್ಲಿ ಆಶ್ರಯ ಮನೆಗಳ ಪಟ್ಟಿಯನ್ನು ತಯಾರು ಮಾಡಿ ತಾವು ಕಳುಹಿಸಬೇಕಾಗಿದೆ. ಇಲ್ಲಿಯವರೆಗೆ ಅದು ಬರುತ್ತಿಲ್ಲ. ಕಳೆದ ತಿಂಗಳೇ ಕೊನೆ ಎಂದು ನಾವು ಪ್ರತಿಯೊಬ್ಬ ಜಿಲ್ಲಾಧಿಕಾರಿಗೆ ಹಾಗೂ ಕಾರ್ಯನಿರ್ವಹಣಾಧಿಕಾರಿಗೆ ಸುತ್ತೋಲೆ ಕಳುಹಿಸಿದ್ದೇವೆ. ಎಲ್ಲಾ ಶಾಸಕರಿಗೂ ನಾವು ಕಳುಹಿಸಿಕೊಟ್ಟಿದ್ದೇವೆ. ಸ್ಪಷ್ಟವಾದ ಗೈಡ್‌ಲೈನ್ಸ್ ಅನ್ನು ನಾವು ಕೊಟ್ಟಿದ್ದೇವೆ.

ಅಧ್ಯಕ್ಷರು: ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು ಅದರ ಬಗ್ಗೆ ಸಾಕಷ್ಟು ಚರ್ಚೆ ಆಗಿದೆ.

ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಸ್. ಸುರೇಶ್ ಕುಮಾರ್(ಕಾನೂನು, ನಗರಾಭಿವೃದ್ಧಿ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, ದಿನಾಂಕ 29,06,2010ರ 2ನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 45 ಪ್ರಶ್ನೆಗಳ ಪೈಕಿ 30 ಪ್ರಶ್ನೆಗಳ ಉತ್ತರಗಳನ್ನು ಹಾಗೂ ದಿನಾಂಕ 28.06.2010ರ 1ನೇ ಪಟ್ಟಿಯಿಂದ ಸದನದಲ್ಲಿ ಉತ್ತರಿಸುವ 15 ಪ್ರಶ್ನೆಗಳ ಪೈಕಿ 9 ಪ್ರಶ್ನೆಗಳ ಉತ್ತರಗಳನ್ನು ಮತ್ತು ಲಿಖಿತ ಮೂಲಕ ಉತ್ತರಿಸುವ 35 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

(ಅನುಬಂಧ – 1, ಅನುಬಂಧ – 2)

12.30 ಪಿ.ಎಂ

ಅಧ್ಯಕ್ಷರು : ಮಂಡಿಸಲಾಯಿತು ಈಗ ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿ/ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯ ಮುಂದೆ ಮಂಡಿಸುವುದು.

3. ಕಾರ್ಯದರ್ಶಿಯವರ ವರದಿ:

ಕಾರ್ಯದರ್ಶಿ (ಕರ್ನಾಟಕ ವಿಧಾನಸಭೆ): ಗೌರವಾನ್ವಿತ ಸಭಾಧ್ಯಕ್ಷರ ಅನುಮೋದನೆಯೊಂದಿಗೆ ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿ/ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಈಗ ಸಭೆಯ ಮುಂದೆ ಮಂಡಿಸುತ್ತೇನೆ.